ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1594
ಸದಸ್ಯರ ಹೆಸರು : ಶ್ರೀ ಶಶೀಲ್ ನಮೋಶಿ
ಉತ್ತರಿಸುವ ದಿನಾಂಕ : 11-03-2022
ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ಕೆ.ಆರ್.ಇ.ಐ.ಎಸ್ ಖಾಯಂ ನೌಕರರು ಮರಣ ಹೊಂದಿದ ಕುಟುಂಬಗಳಿಗೆ ಮರಣ ಮತ್ತು ನಿವೃತ್ತಿ ಉಪದಾನ ಸೌಲಭ್ಯವನ್ನು ನೀಡಲಾಗಿದೆಯೇ;	ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿ 826 ವಸತಿ ಶಾಲೆ/ಕಾಲೇಜುಗಳು (ಪರಿಶಿಷ್ಟ ಜಾತಿ-503, ಪರಿಶಿಷ್ಟ ವರ್ಗ-156, ಹಿಂದುಳಿದವರ್ಗ-167) ಕಾರ್ಯನಿರ್ವಹಿಸುತ್ತಿವೆ. ಸದರಿ ವಸತಿ ಶಾಲೆ/ ಕಾಲೇಜುಗಳಲ್ಲಿ ಒಟ್ಟು 18,988 ಬೋಧಕ/ ಬೋಧಕೇತರ ಹುದ್ದೆಗಳು ಮಂಜೂರಾಗಿದ್ದು, ಈ ಪೈಕಿ 5,801 ಖಾಯಂ ಬೋಧಕ /ಬೋಧಕೇತರ ಸಿಬ್ಬಂಧಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಇಲ್ಲಿಯವರೆಗೆ ಒಟ್ಟು 56 ಸಿಬ್ಬಂದಿಗಳು ನಿಧನ ಹೊಂದಿರುತ್ತಾರೆ.
ಆ)	ಹಾಗಿದ್ದಲ್ಲಿ, ಎಷ್ಟು ಜನ ನೌಕರರಿಗೆ ಈ ಸೌಲಭ್ಯ ನೀಡಲಾಗಿದೆ;	ಸರ್ಕಾರಿ ಆದೇಶ ಸಂಖ್ಯೆ ಆಇ 03 ಸೇನಿಸೇ 2010, ದಿನಾಂಕ 12.10.2010 ಹಾಗೂ ಸಂಘದ 71ನೇ ಆಡಳಿತ ಮಂಡಳಿಯ ತೀರ್ಮಾನದಂತೆ ಸಂಘದ ಖಾಯಂ ಸಿಬ್ಬಂದಿ ಸೇವೆಯಲ್ಲಿರುವಾಗಲೇ ಮೃತರಾದ ಸಂದರ್ಭದಲ್ಲಿ ಅವರ ಕುಟುಂಬಗಳಿಗೆ ಇಡಿಗಂಟಿನ ಪರಿಹಾರವನ್ನು ನೀಡಲು ಅವಕಾಶವನ್ನು ಕಲ್ಪಿಸಲಾಗಿರುತ್ತದೆ. ಅದರಂತೆ ದಿನಾಂಕ: 01.04.2018 ವರೆಗೆ ವಸತಿ ಶಾಲೆಗಳಲ್ಲಿ ಮರಣ ಹೊಂದಿದ 15 ಸಿಬ್ಬಂದಿಗಳಿಗೆ ಇಡಿಗಂಟಿನ ಸೌಲಭ್ಯವನ್ನು ನೀಡಲಾಗಿರುತ್ತದೆ.
ಇ)	ಸರ್ಕಾರದ ವಿಳಂಬ ನೀತಿಯಿಂದ ಮೃತ ಕುಟುಂಬಗಳು ಸದರಿ ಸೌಲಭ್ಯದಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	
ಈ)	ಹಲವಾರು ವರ್ಷಗಳಿಂದ ಜಾರಿಯಾಗದೇ ಇರುವ ಮರಣ ಮತ್ತು ನಿವೃತ್ತಿ ಉಪದಾನವನ್ನು ಸೌಲಭ್ಯವನ್ನು ಯಾವ ಕಾಲಮಿತಿಯಲ್ಲಿ ಜಾರಿಗೊಳಿಸಲಾಗುವುದು? (ಮಾಹಿತಿ ಒದಗಿಸುವುದು)	ಸರ್ಕಾರದ ಆದೇಶ ಸಂಖ್ಯೆ ಆಇ 34 ಪಿಇಎನ್ 2018, ದಿನಾಂಕ: 23.06.2018 ರಲ್ಲಿ ರನ್ವಯ ಇಡಿಗಂಟಿನ ಸೌಲಭ್ಯವನ್ನು ದಿನಾಂಕ: 01.04.2018 ರಿಂದ ಅನ್ವಯಿಸಿ ಹಿಂಪಡೆಯಲಾಗಿದೆ. ಸರ್ಕಾರದ ಆದೇಶ ಸಂಖ್ಯೆ ಆಇ 34 ಪಿಇಎನ್ 2018, ದಿನಾಂಕ:23.06.2018 ರ ಸರ್ಕಾರದ ಆದೇಶದ ನೂತನ ಪಿಂಚಣಿ ಯೋಜನೆಗೆ ಒಳಪಡುವ ಸರ್ಕಾರಿ ನೌಕರರಿಗೆ ಎಂದು ಸ್ಪಷ್ಟವಾಗಿ ತಿಳಿಸಿರುವುದರಿಂದ ಸದರಿ ಸೌಲಭ್ಯವು ಸರ್ಕಾರದ ನಿಗಮ ಮಂಡಳಿಗಳು,

		ಸ್ವಾಯುತ್ತ ಸಂಸ್ಥೆಗಳು, ಹಾಗೂ ಸರ್ಕಾರದ ಅಧೀನದ ಇನ್ನಿತರ ಯಾವುದೇ ಸಂಘ ಸಂಸ್ಥೆಗಳ ನೌಕರರಿಗೆ ಅನ್ವಯವಾಗುವುದಿಲ್ಲ. ಆದ್ದರಿಂದ ಸಂಘದ ನೌಕರರಿಗೆ ನಿವೃತ್ತಿ ಮತ್ತು ಮರಣ ಉಪದಾನ ಹಾಗೂ ಕುಟುಂಬ ಪಿಂಚಣಿ ಸೌಲಭ್ಯ ವಿಸ್ತರಿಸಲು ಸಾಧ್ಯವಿಲ್ಲವೆಂದು ತಿಳಿಸಲಾಗಿರುತ್ತದೆ. ಆದಾಗ್ಯೂ ಸಹ ಸಂಘದ ಖಾಯಂ ನೌಕರರ ಹಿತದೃಷ್ಟಿಯಿಂದ ದಿ:01.08.2016 ರಿಂದ ಅನ್ವಯವಾಗುವಂತೆ ವಾರ್ಷಿಕ ಗುಂಪು ವಿಮೆ ಸೌಲಭ್ಯವನ್ನು ಕಲ್ಪಿಸಲಾಗಿದ್ದು, ಈವರೆಗೆ ಅರ್ಹರಿರುವ 35 ಮೃತರ ಕುಟಂಬಕ್ಕೆ ಈ ಸೌಲಭ್ಯ ನೀಡಲಾಗಿರುತ್ತದೆ. ಮುಂದುವರೆದು, ಸಂಘದ ನೌಕರರಿಗೆ ನಿವೃತ್ತಿ/ಮರಣ ಉಪದಾನ ಹಾಗೂ ಕುಟುಂಬ ಪಿಂಚಣಿ ಸೌಲಭ್ಯವನ್ನು ವಿಸ್ತರಿಸುವಂತೆ ಹೆಚ್ಚುವರಿ ಮಾಹಿತಿಯೊಂದಿಗೆ ಆರ್ಥಿಕ ಇಲಾಖೆಗೆ ಮತ್ತೊಮ್ಮೆ ಪ್ರಸ್ತಾವನೆಯನ್ನು ಸಲ್ಲಿಸಲು ಕ್ರಮವಹಿಸಲಾಗುತ್ತಿದೆ.

ಸಕಇ 153 ಮೊದೇಶಾ 2022

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು